86

# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಎಂ. ನಾಗರಾಜು ರವರು ನಿಯಮ-72ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.

ವಿಷಯ:- ಕಾಡುಗೊಲ್ಲ ಜಾತಿಯನ್ನು ಗ್ರಾಮ ಪಂಚಾಯತಿಯ ಚುನಾವಣಾ ಜಾತಿ ಪಟ್ಟಿಯಲ್ಲಿ ಸೇರಿಸದಿರುವ ಕುರಿತು.

ಉತ್ತರ:- ಭಾರತ ಸಂವಿಧಾನದ ಅನುಚ್ಛೇದ 15(4)ರನ್ವಯ ವಿದ್ಯಾಸಂಸ್ಥೆಗಳಲ್ಲಿ ಪ್ರವೇಶ ಪಡೆಯಲು ಹಾಗೂ ಸಂವಿಧಾನದ ಅನುಚ್ಛೇದ 16(4)ರನ್ವಯ ಸರ್ಕಾರ ಹಾಗೂ ಸಾರ್ವಜನಿಕ ನೇಮಕಾತಿಗಳಲ್ಲಿ ಮೀಸಲಾತಿ ಪಡೆಯಲು ಸರ್ಕಾರ ಅಧಿಸೂಚಿಸಿರುವ ಸರ್ಕಾರದ ಸೇರ್ಪಡೆ ಆದೇಶ ಸಂಖ್ಯೆ: ಹಿಂವಕ 328 ಬಿಸಿಎ 2017, ದಿನಾಂಕ:29.01.2018ರ ಆದೇಶದಲ್ಲಿ ಕಾಡುಗೊಲ್ಲಮತ್ತು ಹಟ್ಟಿಗೊಲ್ಲ ಜಾತಿಗಳನ್ನು ಪ್ರವರ್ಗ-1ರಲ್ಲಿ ಸೇರಿಸಿ ಆದೇಶಿಸಿರುತ್ತದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಅಧಿಸೂಚಿಸಿರುವ ಹಿಂದುಳಿದ ಜಾತಿಗಳಿಗೆ ಪಂಚಾಯತ್ ರಾಜ್ ವ್ಯವಸ್ಥೆಯ ಮೂರು ಹಂತದ ಸಂಸ್ಥೆಗಳನ್ನೊಳಗೊಂಡಂತೆ, ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಸ್ಪರ್ಧಿಸಲು ಮೀಸಲಾತಿಗೆ ಅರ್ಹರಿರುವ ಜಾತಿಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಸರ್ಕಾರದ ಅಧಿಸೂಚನೆ ಸಂಖ್ಯೆ:RDP 5 ZPS 1995(i), ದಿನಾಂಕ:13.01.1995ರಲ್ಲಿ ಪ್ರಕಟಿಸಿರುತ್ತದೆ. ಈ ಅಧಿಸೂಚನೆಯ ಪ್ರವರ್ಗ-ಅ ರಡಿ ಕಾಡುಗೊಲ್ಲ ಮತ್ತು ಹಟ್ಟಿಗೊಲ್ಲ ಜಾತಿಗಳನ್ನು ಸೇರಿಸುವ ಪ್ರಸ್ತಾವನೆಯ ಪ್ರಕ್ರಿಯೆಯು ಪರಿಶೀಲನೆಯಲ್ಲಿದ್ದು ಶೀಘ್ರ ನಿರ್ಧಾರ / ನಿರ್ಣಯ ಕೈಗೊಳ್ಳಲಾಗುವುದು. ಕಾಡುಗೊಲ್ಲ ಜಾತಿಯನ್ನು ಸ್ಥಳೀಯ ಸಂಸ್ಥೆಗಳ ಚುನಾವಣೆಯ ಮೀಸಲಾತಿಗಾಗಿ ಸರ್ಕಾರ ಅಧಿಸೂಚಿಸಿದ ನಂತರ ಕರ್ನಾಟಕ ಪಂಚಾಯತ್ ರಾಜ್ (ಚುನಾವಣೆಯನ್ನು ನಡೆಸುವ) ನಿಯಮಗಳು, 1993ರ ಪ್ರಕರಣ 2(8-ಎ) ರನ್ವಯ ಜಾತಿ ಪ್ರಮಾಣ ಪತ್ರವನ್ನು ನೀಡಲು ಸಂಬಂಧಪಟ್ಟ ತಾಲ್ಲೂಕು ವ್ಯಾಪ್ತಿಗೆ ಸೇರಿದ ತಹಶೀಲ್ದಾರ್ ರವರು ಸಕ್ಷಮ ಪ್ರಾಧಿಕಾರವಾಗಿರುತ್ತಾರೆ.

ಸಂಖ್ಯೆ: ಗ್ರಾಅಪಂರಾ 228 ಜಿಪಸ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿಮತ್ತುಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.